# All India Radio: Bangalore
# Regional Bulletin In Kannada
# 06.12.2025 / 6.40 p.m.

## ಆಕಾಶವಾಣಿ ಬೆಂಗಳೂರು

## ಪ್ರದೇಶ ಸಮಾಚಾರ

<u>ಮುಖ್ಯಾಂಶಗಳು</u>

1. **ಹಾಸನದಲ್ಲಿ 298 ಕೋಟಿ ರೂಪಾಯಿಗಳ ಅಭಿವೃದ್ಧಿ ಯೋಜನೆಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಚಾಲನೆ**
2. **ಅಭಿವೃದ್ಧಿಪಡಿಸಿದ ನೂತನ ತಳಿಗಳನ್ನು ರೈತರಿಗೆ ತಲುಪಿಸುವಂತೆ ಕೃಷಿ ವಿಜ್ಞಾನಿಗಳಿಗೆ ಕೇಂದ್ರ ಸಚಿವ ಹೆಚ್.ಡಿ. ಕುಮಾರಸ್ವಾಮಿ ಸಲಹೆ**
3. **ನಿಮ್ಹಾನ್ಸ್ 28ನೇ ಘಟಿಕೋತ್ಸವ : 251 ವಿದ್ಯಾರ್ಥಿಗಳಿಗೆ ಸಚಿವ ಡಾ. ಶರಣಪ್ರಕಾಶ್ ಪಾಟೀಲ್ ಪದವಿ ಪ್ರದಾನ**
4. **ಬೆಳಗಾವಿಯಲ್ಲಿ 1 ಸಾವಿರದ 264 ಅಗ್ನಿವೀರ ವಾಯು ಪ್ರಶಿಕ್ಷಣಾರ್ಥಿಗಳಿಂದ ನಿರ್ಗಮನ ಪಥಸಂಚಲನ**
5. **ಸೋಮವಾರದಿಂದ ವಿಧಾನಮಂಡಲದ ಚಳಿಗಾಲದ ಅಧಿವೇಶನ – ರಾಜ್ಯದ ಜ್ವಲಂತ ಸಮಸ್ಯೆಗಳ ಬಗ್ಗೆ ಚರ್ಚಿಸಲು ಬಿಜೆಪಿ ನಿರ್ಧಾರ**

***************

ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದ ಒಂದು ವರ್ಷದಲ್ಲಿ ಎಲ್ಲಾ ಗ್ಯಾರಂಟಿ ಯೋಜನೆಗಳನ್ನು ಯಶಸ್ವಿಯಾಗಿ ಜಾರಿಗೊಳಿಸಿದ್ದು, ಕೊಟ್ಟ ಮಾತಿನಂತೆ ನಡೆದಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ. ಹಾಸನದಲ್ಲಿಂದು ಸುಮಾರು 298 ಕೋಟಿ ರೂಪಾಯಿಗಳ ಅಭಿವೃದ್ಧಿ ಕಾರ್ಯಕ್ರಮಗಳಿಗೆ ಶಂಕು ಸ್ಥಾಪನೆ ಹಾಗೂ ಉದ್ಘಾಟನೆ ನೆರವೇರಿಸಿ ಮಾತನಾಡಿದ ಅವರು, ಹೇಮಾವತಿ ಜಲಾಶಯದ ಬಳಿ ನಿರ್ಮಿಸುವುದಾಗಿ ಭರವಸೆ ನೀಡಿದ್ದಾರೆ. ಸಮ ಸಮಾಜ ನಿರ್ಮಾಣ ಮಾಡಬೇಕು ಎಂದರೆ ಎಲ್ಲರಿಗೂ ಸಮಾನ ಅವಕಾಶ ದೊರೆಯಬೇಕು ಎಂದು ತಿಳಿಸಿದ್ದಾರೆ.

ಇದೇ ವೇಳೆ ಮಾತನಾಡಿದ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಕಂದಾಯ ಸಚಿವ ಕೃಷ್ಣ ಬೈರೇಗೌಡರ ನೇತೃತ್ವದಲ್ಲಿ 6ನೇ ಗ್ಯಾರಂಟಿ ಭೂಮಿ ಗ್ಯಾರಂಟಿ ಅನುಷ್ಠಾನಕ್ಕೆ ತರುವುದಾಗಿ ಭರವಸೆ ನೀಡಿದ್ದಾರೆ. ಮೇಕೆದಾಟು, ಎತ್ತಿನಹೊಳೆ ಯೋಜನೆಯಿಂದ ಹಾಸನ, ಮಂಡ್ಯ, ಮೈಸೂರು, ಚಾಮರಾನಗರ ಸೇರಿದಂತೆ ಹಲವು ಜಿಲ್ಲೆಗಳಲ್ಲಿನ ಕುಡಿಯುವ ನೀರಿನ ಸಮಸ್ಯೆ ಬಗೆ ಹರಿಯಲಿದೆ ಎಂದು ತಿಳಿಸಿದ್ದಾರೆ.

***************

ಬಡವರು, ಪರಿಶಿಷ್ಟರು, ಅಲ್ಪ ಸಂಖ್ಯಾತರು, ಮಹಿಳೆಯರ ಸಬಲೀಕರಣಕ್ಕೆ ಗ್ಯಾರಂಟಿ ಸೇರಿದಂತೆ ಅನೇಕ ಯೋಜನೆಗಳಿಂದ ಅನುಕೂಲವಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ. ಹಾಸನದಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಜಿಎಸ್‌ಟಿ ದರ ಕಡಿತದಿಂದ ರಾಜ್ಯಕ್ಕೆ ನಷ್ಟವಾಗಿದೆ ಎಂದು ತಿಳಿಸಿದ್ದಾರೆ. ಮೇಕೆದಾಟು ಯೋಜನೆಗೆ ಕೇಂದ್ರ ಸರ್ಕಾರ ಅನುಮತಿ ನೀಡದೇ ಮಂಡ್ಯ ಜನತೆಗೆ ಅನ್ಯಾಯವಾಗಿದೆ ಎಂದು ಅವರು ದೂರಿದ್ದಾರೆ. ರಾಜ್ಯ ಸರ್ಕಾರ ತೆರೆದ ಪುಸ್ತಕದಂತಿದ್ದು, ಎಲ್ಲವನ್ನು ಎದುರಿಸಲು ಸಿದ್ಧವಾಗಿದೆ ಎಂದು ಹೇಳಿದ್ದಾರೆ.

***************

ಕೃಷಿ ವಿಶ್ವ ವಿದ್ಯಾನಿಲಯಗಳಲ್ಲಿನ ವಿಜ್ಞಾನಿಗಳು ಅಭಿವೃದ್ಧಿಪಡಿಸುವ ನೂತನ ತಳಿಗಳು ರೈತರನ್ನು ತಲುಪಬೇಕು ಎಂದು ಕೇಂದ್ರ ಉಕ್ಕು ಮತ್ತು ಬೃಹತ್ ಕೈಗಾರಿಕಾ ಸಚಿವ ಹೆಚ್.ಡಿ ಕುಮಾರಸ್ವಾಮಿ ತಿಳಿಸಿದ್ದಾರೆ. ಮಂಡ್ಯದ ವಿ.ಸಿ ಫಾರಂ ಆವರಣದಲ್ಲಿ ನಡೆಯುತ್ತಿರುವ 'ಕೃಷಿ ಮೇಳ 2025'ರ ಸಮಗ್ರ ಕೃಷಿಯಿಂದ ಸುಸ್ಥಿರತೆ ಕಾರ್ಯಕ್ರಮವನ್ನು ಉದ್ಘಾಟಿಸಿದ ಅವರು, ರಾಜ್ಯ ಸರ್ಕಾರ ವಿ.ಸಿ ಫಾರ್ಮನ್ನು ಕೃಷಿ ವಿಜ್ಞಾನಿಗಳ ವಿಶ್ವವಿದ್ಯಾನಿಲಯ ಮಾಡಿ ರೈತರಿಗೆ ಕೃಷಿಯ ಕುರಿತಾಗಿ ಜ್ಞಾನ ಹೆಚ್ಚಿಸಲು ಕೃಷಿ ಮೇಳ ಆಯೋಜಿಸಿದೆ. ಕೇಂದ್ರ ಸರ್ಕಾರ ಕೃಷಿ ವಲಯಕ್ಕೆ 1 ಲಕ್ಷದ 34 ಸಾವಿರ ಕೋಟಿ ಅನುದಾನವನ್ನು ಮೀಸಲಿಟ್ಟಿದೆ ಎಂದು ತಿಳಿಸಿದ್ದಾರೆ. ರಾಜ್ಯ ಸರ್ಕಾರ ಖರೀದಿ ಕೇಂದ್ರಗಳನ್ನು ತೆರೆದು ಮೆಕ್ಕೆಜೋಳ ಖರೀದಿ ಮಾಡಿ ಕೇಂದ್ರ ಸರ್ಕಾರಕ್ಕೆ ಸಲ್ಲಿಸಿದರೆ ಕನಿಷ್ಠ ಬೆಂಬಲ ಬೆಲೆಗೆ ಮೆಕ್ಕೆಜೋಳವನ್ನು ಖರೀದಿ ಮಾಡಲಿದೆ ಎಂದು ಸ್ಪಷ್ಟಪಡಿಸಿದ್ದಾರೆ.

***************

ಆಧುನಿಕ ಸಂಶೋಧನೆ ಹಾಗೂ ವೈದ್ಯರ ಅವಿರತ ಶ್ರಮದಿಂದ ನಿಮ್ಹಾನ್ಸ್ ಸಂಸ್ಥೆ ಇಂದು ಭಾರತದಲ್ಲಿಯೇ ಅತ್ಯುನ್ನತ ಸ್ಥಾನ ಪಡೆದಿದೆ ಎಂದು ಉನ್ನತ ಶಿಕ್ಷಣ ಸಚಿವ ಡಾ. ಶರಣಪ್ರಕಾಶ್ ಪಾಟೀಲ್ ತಿಳಿಸಿದ್ದಾರೆ. ಬೆಂಗಳೂರಿನಲ್ಲಿ ಇಂದು ನಡೆದ ರಾಷ್ಟ್ರೀಯ ಮಾನಸಿಕ ಆರೋಗ್ಯ ಮತ್ತು ನರ ವಿಜ್ಞಾನ ಸಂಸ್ಥೆ – ನಿಮ್ಹಾನ್ಸ್‌ನ 28ನೇ ಘಟಿಕೋತ್ಸವ ಸಮಾರಂಭದಲ್ಲಿ ಮಾತನಾಡಿದ ಅವರು, ಪದವಿ ಪಡೆದ ವೈದ್ಯಕೀಯ ವಿದ್ಯಾರ್ಥಿಗಳಿಗೆ

ಅಭಿನಂದನೆ ಸಲ್ಲಿಸಿದ್ದಾರೆ. ವಿಡಿಯೋ ಕಾನ್ಫರೆನ್ಸ್ ಮೂಲಕ ಮಾತನಾಡಿದ ಕೇಂದ್ರ ಸಚಿವೆ ನಿರ್ಮಲಾ ಸೀತಾರಾಮನ್ ನರ ವಿಜ್ಞಾನವು ಒಂದು ಕಿರಿದಾದ ವಿಭಾಗವಲ್ಲ. ಇದು ದೇಶದ ಸಾರ್ವಜನಿಕ ಆರೋಗ್ಯ ಆದ್ಯತೆಗಳಿಗೆ ಹಾಗೂ ಸಾಮಾಜಿಕ ಸ್ಥಿರತೆಗೆ ಕೇಂದ್ರವಾಗಿದೆ ಎಂದು ಹೇಳಿದ್ದಾರೆ.

ಇದೇ ವೇಳೆ ಮಾತನಾಡಿದ ನಿಮ್ಹಾನ್ಸ್ ನಿರ್ದೇಶಕಿ ಡಾ. ಪ್ರತಿಮಾ ಮಾತನಾಡಿ, ಇಲ್ಲಿನ ವೈದ್ಯರು ನಿರಂತರ ಸಂಶೋಧನೆಯ ಮೂಲಕ ಈಗಾಗಲೇ ಮಾನಸಿಕ ವಿಜ್ಞಾನ ಕುರಿತು ಸಂಶೋಧನೆ ನಡೆಸಿ, ವಿಶ್ವದ ಅತ್ಯುತ್ತಮ ಜರ್ನಲ್‌ಗಳಿಗೆ ಲೇಖನಗಳನ್ನು ಬರೆದಿದ್ದಾರೆ. ತಂತ್ರಜ್ಞಾನದ ಮೂಲಕ ರೋಗಿಗಳ ಮಾನಸಿಕ ಆರೋಗ್ಯವನ್ನು ಸುಧಾರಿಸುವಲ್ಲಿ ನಿಮ್ಹಾನ್ಸ್ ಕಾರ್ಯನಿರ್ವಹಿಸುತ್ತಿದೆ ಎಂದು ತಿಳಿಸಿದ್ದಾರೆ.

ಘಟಿಕೋತ್ಸವದಲ್ಲಿ 251 ವಿದ್ಯಾರ್ಥಿಗಳು ವಿವಿಧ ಪದವಿಗಳು ಮತ್ತು ಪ್ರಮಾಣ ಪತ್ರಗಳನ್ನು ಸ್ವೀಕರಿಸಿದರು. 28 ಪ್ರತಿಭಾನ್ವಿತ ವಿದ್ಯಾರ್ಥಿಗಳಿಗೆ ಶ್ರೇಷ್ಠತಾ ಪ್ರಶಸ್ತಿಗಳನ್ನು ಪ್ರದಾನ ಮಾಡಲಾಯಿತು.

***************

ಬೆಳಗಾವಿ ಹೊರವಲಯದ ಸಾಂಬ್ರಾದಲ್ಲಿನ ಏರಮನ್ ತರಬೇತಿ ಶಾಲೆಯಲ್ಲಿ ಕಳೆದ 22 ವಾರಗಳಿಂದ ತರಬೇತಿ ಪಡೆದ ಅಗ್ನಿವೀರವಾಯು ಪ್ರಶಿಕ್ಷಣಾರ್ಥಿಗಳ ನಾಲ್ಕನೇ ತಂಡದ ನಿರ್ಗಮನ ಪಥಸಂಚಲನ ಇಂದು ನಡೆಯಿತು. ಭಾರತೀಯ ವಾಯುಪಡೆಯ ತರಬೇತಿ ವಿಭಾಗದ ಸಹಾಯಕ ಮುಖ್ಯಸ್ಥ ಏರ್ ವೈಸ್ ಮಾರ್ಷಲ್ ವೆಂಕಟ್ ಟಿ ಮೇರ್, ಅಗ್ನಿವೀರ ಪ್ರಶಿಕ್ಷಣಾರ್ಥಿಗಳ ಪಥ ಸಂಚಲನ ಗೌರವ ವಂದನೆ ಸ್ವೀಕರಿಸಿದರು. ಪುರುಷ ಮತ್ತು ಮಹಿಳೆಯರು ಸೇರಿ ಒಟ್ಟು 1 ಸಾವಿರದ 264 ಅಗ್ನಿವೀರವಾಯು ಪ್ರಶಿಕ್ಷಣಾರ್ಥಿಗಳು ತರಬೇತಿ ಪೂರ್ಣಗೊಳಿಸಿ ಕರ್ತವ್ಯ ಹಾಜರಾತಿಗೆ ಅವಕಾಶ ಪಡೆದಿದ್ದಾರೆ. ಇದೇ ವೇಳೆ ಮಾತನಾಡಿದ ಏರ್ ವೈಸ್ ಮಾರ್ಷಲ್ ವೆಂಕಟ್ ಟಿ ಮೇರ್ 'ತರಬೇತಿದಾರರು ನೂತನ ವೃತ್ತಿಪರ ಕೌಶಲ್ಯಗಳನ್ನು ಪಡೆಯಲು ಮುಕ್ತವಾದ ಮನಸ್ಥಿತಿ ಹೊಂದಿರಬೇಕು ಎಂದು ಕಿವಿಮಾತು ಹೇಳಿದರು.

***************

ಬೆಳಗಾವಿಯಲ್ಲಿ ಸೋಮವಾರದಿಂದ ವಿಧಾನ ಮಂಡಲದ ಚಳಿಗಾಲದ ಅಧಿವೇಶನ ಆರಂಭವಾಗಲಿದೆ. ಅಧಿವೇಶನದಲ್ಲಿ ರಾಜ್ಯದ ಜ್ವಲಂತ ಸಮಸ್ಯೆಗಳ ಕುರಿತು ಚರ್ಚೆ ನಡೆಸುವ ಜೊತೆಗೆ ರಾಜ್ಯ ಸರ್ಕಾರದ ವೈಫಲ್ಯಗಳನ್ನು ಜನರಿಗೆ ತಿಳಿಸಲು ಬಿಜೆಪಿ–ಜೆಡಿಎಸ್ ಪಕ್ಷಗಳು ನಿರ್ಧರಿಸಿವೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ತಿಳಿಸಿದ್ದಾರೆ.

ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಉತ್ತರ ಕರ್ನಾಟಕದ ಸಮಸ್ಯೆ, ರೈತರ ಸಂಕಷ್ಟ, ನೀರಾವರಿ ಸಮಸ್ಯೆ ಸೇರಿದಂತೆ ವಿವಿಧ ವಿಷಯಗಳ ಕುರಿತು ವಿಧಾನಮಂಡಲ ಅಧಿವೇಶನದಲ್ಲಿ ಪ್ರಸ್ತಾಪ ಮಾಡುವ ಕುರಿತು ಸುದೀರ್ಘ ಚರ್ಚೆ ನಡೆಸಲಾಗಿದೆ ಎಂದು ಹೇಳಿದ್ದಾರೆ. ಕಬ್ಬು ಬೆಳೆಗಾರರ ಸಮಸ್ಯೆ, ಮೆಕ್ಕೆಜೋಳ ಖರೀದಿ, ತುಂಗಭದ್ರಾ ಜಲಾಶಯ ಗೇಟ್ ಅಳವಡಿಕೆ ವಿಳಂಬ ಸೇರಿದಂತೆ ಹಲವು ವಿಷಯಗಳನ್ನು ಪ್ರಸ್ತಾಪ ಮಾಡಲು ತೀರ್ಮಾನಿಸಲಾಗಿದೆ ಎಂದು ಸ್ಪಷ್ಟಪಡಿಸಿದ್ದಾರೆ.

***************

ತುಂಗಭದ್ರಾ ಜಲಾಶಯದ ನೂತನ ಕ್ರಸ್ಟ್ ಗೇಟ್ ಅಳವಡಿಸುವ ಕಾರ್ಯ ಇದೇ 20 ರಿಂದ ಆರಂಭವಾಗಬೇಕು ಎಂದು ಕೊಪ್ಪಳ ಜಿಲ್ಲಾ ಉಸ್ತುವಾರಿ ಸಚಿವ ಶಿವರಾಜ ಎಸ್. ತಂಗಡಗಿ ತಿಳಿಸಿದ್ದಾರೆ. ತುಂಗಭದ್ರಾ ಜಲಾಶಯದ ನೂತನ ಕ್ರಸ್ಟಗೇಟ್ ಅಳವಡಿಸುವ ಕುರಿತು ಕೊಪ್ಪಳದಲ್ಲಿಂದು ಕೆ.ಎನ್.ಎನ್.ಎಲ್ ಅಧಿಕಾರಿಗಳು ಹಾಗೂ ತುಂಗಭದ್ರಾ ಮಂಡಳಿಯ ಅಧಿಕಾರಿಗಳೊಂದಿಗೆ ನಡೆದ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ತುಂಗಭದ್ರಾ ಜಲಾಶಯವು ಈ ಭಾಗದ ಲಕ್ಷಾಂತರ ರೈತರ ಜೀವನಾಡಿಯಾಗಿದೆ ಎಂದು ಹೇಳಿದ್ದಾರೆ. ಪ್ರಸ್ತುತ ಹಳೆಯದಾಗಿರುವ ಜಲಾಶಯದ ಎಲ್ಲಾ 33 ಕ್ರಸ್ಟ್ ಗೇಟ್‌ಗಳನ್ನು ಬದಲಾಯಿಸಲು 52 ಕೋಟಿ ರೂಪಾಯಿಗಳ ವೆಚ್ಚದಲ್ಲಿ ಈಗಾಗಲೇ ಟೆಂಡರ್ ಕರೆಯಲಾಗಿದೆ. ಅದರಂತೆ ಪ್ರಸ್ತುತ ಕ್ರಸ್ಟ್ ಗೇಟ್‌ಗಳ ಡಿಸ್ ಮೆಟಲಿಂಗ್ ಮತ್ತು ಇತರೆ ಕೆಲಸಗಳನ್ನು ತ್ವರಿತವಾಗಿ ಕೈಗೊಳ್ಳಬೇಕು ಎಂದು ತಿಳಿಸಿದ್ದಾರೆ. ಕಾಮಗಾರಿಯನ್ನು ನಿಗದಿತ ಅವಧಿಯ ಒಳಗೆ ಪೂರ್ಣಗೊಳಿಸಬೇಕೆಂದು ಸೂಚನೆ ನೀಡಿದ್ದಾರೆ.

***************

ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯು ಈ ಹಿಂದೆ ಇದ್ದ ಇ–ಸ್ವತ್ತು ತಂತ್ರಾಂಶವನ್ನು ನಾಗರಿಕ ಸ್ನೇಹಿಯಾಗಿ ಮಾರ್ಪಡಿಸಿದೆ ಎಂದು ಗ್ರಾಮೀಣಾಭಿವೃದ್ಧಿ ಸಚಿವ ಪ್ರಿಯಾಂಕ್ ಖರ್ಗೆ ತಿಳಿಸಿದ್ದಾರೆ. ಪ್ರತಿದಿನ ಮೂರು ಸಾವಿರಕ್ಕೂ ಹೆಚ್ಚು ಕರೆಗಳನ್ನು ಸಾರ್ವಜನಿಕರಿಂದ ಸ್ವೀಕರಿಸಲಾಗುತ್ತಿದೆ, ಸಹಾಯವಾಣಿಗೆ ಸಾರ್ವಜನಿಕರಿಂದ ಸ್ವೀಕೃತಿಯಾಗುತ್ತಿರುವ ಪ್ರಶ್ನೆಗಳಲ್ಲಿ ಹೆಚ್ಚಿನ ಪ್ರಶ್ನೆಗಳು ಅರ್ಜಿ ಸಲ್ಲಿಸುವ ಪ್ರಕ್ರಿಯೆ, ಅನುಮೋದನೆ ಪ್ರಕ್ರಿಯೆ, ಆಸ್ತಿ ವರ್ಗೀಕರಣವನ್ನು ಆಯ್ಕೆ ಮಾಡುವ ವಿಧಾನ, ಇ–ಸ್ವತ್ತು ನಮೂನೆ ವಿತರಿಸಲು ನಿಗದಿಯಾಗಿರುವ ಕಾಲಾವಧಿ ಹಾಗೂ ತಾಂತ್ರಿಕ ಸಮಸ್ಯೆಗಳಿಗೆ ಸಂಬಂಧಿಸಿದ್ದಾಗಿರುತ್ತವೆ ಎಂದು ಸಚಿವರು ಮಾಹಿತಿ ನೀಡಿದ್ದಾರೆ.

*******ಮುಕ್ತಾಯ*******